# ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ : 2018–19ನೇ ಸಾಲಿನಲ್ಲಿ ಮಹಾತ್ಮ ಗಾಂಧಿ ಗ್ರಾಮೀಣ ಇಂಧನ ಮತ್ತು ಅಭಿವೃದ್ಧಿ ಸಂಸ್ಥೆಯ ಆವರ್ತಕ ವೆಚ್ಚಗಳಿಗಾಗಿ ಮೊದಲನೇ ಕಂತಿನ ಅನುದಾನ ಬಿಡುಗಡೆ ಕುರಿತು.

ಓದಲಾಗಿದೆ : ಆರ್ಥಿಕ ಇಲಾಖೆಯ ಆದೇಶ ಸಂಖ್ಯೆ: ಎಫ್‌ಡಿ 02 ಟಿಎಫ್‌ಪಿ 2018 ದಿನಾಂಕ 03.04.2018

**ಪ್ರಸ್ತಾವನೆ :**

**2018–19**ನೇ ಸಾಲಿನಲ್ಲಿ ರಾಜ್ಯ ಆಯವ್ಯಯದಡಿ ಮಹಾತ್ಮ ಗಾಂಧಿ ಗ್ರಾಮೀಣ ಇಂಧನ ಮತ್ತು ಅಭಿವೃದ್ಧಿ ಸಂಸ್ಥೆಗೆ (MGIRED) **ರೂ.284.00**ಲಕ್ಷಗಳನ್ನು ಸಂಸ್ಥೆಯ ಆವರ್ತಕ ವೆಚ್ಚಗಳಿಗಾಗಿ ಒದಗಿಸಲಾಗಿದೆ.

ಇದರನ್ವಯ **2018–19**ನೇ ಸಾಲಿಗೆ ಸಂಬಂಧಿಸಿದಂತೆ ಮೊದಲನೇ ಕಂತಿನ ಅನುದಾನ **ರೂ.71.00**ಲಕ್ಷಗಳನ್ನು ಮಹಾತ್ಮ ಗಾಂಧಿ ಗ್ರಾಮೀಣ ಇಂಧನ ಮತ್ತು ಅಭಿವೃದ್ಧಿ ಸಂಸ್ಥೆಯ ಆವರ್ತಕ ವೆಚ್ಚಗಳಿಗಾಗಿ ಲೆಕ್ಕ ಶೀರ್ಷಿಕೆ **2501-04-105-0-02-059**ಯಡಿ ಕಾರ್ಯನಿರ್ವಾಹಕ ನಿರ್ದೇಶಕರು, ಮಹಾತ್ಮ ಗಾಂಧಿ ಗ್ರಾಮೀಣ ಇಂಧನ ಮತ್ತು ಅಭಿವೃದ್ಧಿ ಸಂಸ್ಥೆ, ಬೆಂಗಳೂರು ರವರಿಗೆ ಬಿಡುಗಡೆ ಮಾಡಲು ಸರ್ಕಾರ ತೀರ್ಮಾನಿಸಿದೆ. ಪ್ರಯುಕ್ತ ಈ ಆದೇಶ.

**ಸರ್ಕಾರದ ಆದೇಶ ಸಂಖ್ಯೆ : ಗ್ರಾಅಪ/25/ಜೈಅಯೋ/2018 ಬೆಂಗಳೂರು,**
**ದಿನಾಂಕ.11.04.2018.**

ಪ್ರಸ್ತಾವನೆಯಲ್ಲಿ ವಿವರಿಸಿದಂತೆ **2018–19**ನೇ ಸಾಲಿನಲ್ಲಿ ಮಹಾತ್ಮ ಗಾಂಧಿ ಗ್ರಾಮೀಣ ಇಂಧನ ಮತ್ತು ಅಭಿವೃದ್ಧಿ ಸಂಸ್ಥೆಯ ಆವರ್ತಕ ವೆಚ್ಚಗಳಿಗಾಗಿ ಲೆಕ್ಕ ಶೀರ್ಷಿಕೆ **2501-04-105-0-02-059**ಯಡಿ ಮೊದಲನೇ ಕಂತಿನ ಅನುದಾನ **ರೂ.71.00ಲಕ್ಷ(ಎಪ್ಪತ್ತೊಂದು ಲಕ್ಷ ರೂಪಾಯಿಗಳು ಮಾತ್ರ)**ಗಳನ್ನು ಕಾರ್ಯನಿರ್ವಾಹಕ ನಿರ್ದೇಶಕರು, ಮಹಾತ್ಮ ಗಾಂಧಿ ಗ್ರಾಮೀಣ ಇಂಧನ ಮತ್ತು ಅಭಿವೃದ್ಧಿ ಸಂಸ್ಥೆ, ಬೆಂಗಳೂರು ರವರಿಗೆ ಈ ಕೆಳಕಂಡ ಷರತ್ತುಗಳನ್ವಯ ಬಿಡುಗಡೆ ಮಾಡಿ ಆದೇಶಿದೆ.

1. ಕರ್ನಾಟಕ ವಿಧಾನ ಸಭಾ ಚುನಾವಣೆ 2018ರ ನಡವಳಿಯ ಮಾದರಿ ಕೋಡ್‌ನಲ್ಲಿ ತಿಳಿಸಿರುವಂತೆ, ಇಲಾಖೆಯ ಅಧಿಕಾರಿಗಳ ನೀತಿ ಸಂಹಿತೆ ಅನ್ವಯ ಕಟ್ಟುನಿಟ್ಟಾಗಿ ಕ್ರಮವಹಿಸುವುದು
2. ಕರ್ನಾಟಕ ಸಾರ್ವಜನಿಕ ಪಾರದರ್ಶಕತೆ ನಿಯಮಾವಳಿ ಅನುಸಾರ ಟೆಂಡರ್ ಕರೆದು ಕ್ರಮ ವಹಿಸುವುದು
3. ಯೋಜನಾ ಮಾರ್ಗಸೂಚಿಗಣ್ವಯ ನಿಯಮಗಳ ಪರಿಪಾಲನೆ
4. ಪಿ.ಡಬ್ಲ್ಯೂಈಡಿ ಕೋಡ್ ಅನುಸರಿಸುವುದು ಹಾಗೂ
5. ಇಲಾಖೆಗೆ ಸಂಬಂಧಿಸಿದ ಇತರೆ ನಿಯಮಗಳನ್ನು ಪಾಲಿಸುವುದು.

ಸದರಿ ಅನುದಾನವನ್ನು ಲೆಕ್ಕ ಶೀರ್ಷಿಕೆ **2501-04-105-0-02-059**ಯಡಿ ಭರಿಸತಕ್ಕದ್ದು.

ಕಾರ್ಯನಿರ್ವಾಹಕ ನಿರ್ದೇಶಕರು, ಮಹಾತ್ಮ ಗಾಂಧಿ ಗ್ರಾಮೀಣ ಇಂಧನ ಮತ್ತು ಅಭಿವೃದ್ಧಿ ಸಂಸ್ಥೆರವರು ಗ್ರಾಂಟ್-ಇನ್-ಏಡ್ ಬಿಲ್ಲನ್ನು ಸಲ್ಲಿಸಿ, ನಿರ್ದೇಶಕರು (ಗ್ರಾಮೂಸೌ-2) ಹಾಗೂ ಪದನಿಮಿತ್ತ ಸರ್ಕಾರದ ಜಂಟಿ ಕಾರ್ಯದರ್ಶಿರವರ ಮೇಲು ರುಜು ಪಡೆದು, ಖಜಾನೆಯಿಂದ ಅನುದಾನ ಪಡೆಯತಕ್ಕದ್ದು. ಬಿಡುಗಡೆ ಮಾಡಿದ ಅನುದಾನವನ್ನು ಉದ್ದೇಶಿತ ಯೋಜನೆಗಳಿಗಾಗಿ ಮಾತ್ರ ವಿನಿಯೋಗಿಸುವುದು ಹಾಗೂ ಬಿಡುಗಡೆಯಾದ ಅನುದಾನಕ್ಕೆ ವೆಚ್ಚದ ವಿವರಗಳನ್ನು ಸರ್ಕಾರಕ್ಕೆ ನಿಗದಿತವಾಗಿ ಸಲ್ಲಿಸುವುದು.

ಈ ಆದೇಶವನ್ನು ಆರ್ಥಿಕ ಇಲಾಖೆಯ ಆದೇಶ ಸಂಖ್ಯೆ **ಎಫ್‌ಡಿ 02 ಟಿಎಫ್‌ಪಿ 2018, ದಿನಾಂಕ 03.04.2018ರ** ಆದೇಶದನ್ವಯ ಆಡಳಿತ ಇಲಾಖಾ ಮುಖ್ಯಸ್ಥರಿಗೆ ಆರ್ಥಿಕ ವಿತ್ತಾಧಿಕಾರ ಪ್ರತ್ಯಾಯೋಜಿಸಿರುವ ಮೇರೆಗೆ ಇಲಾಖಾ ಆಂತರಿಕ ಆರ್ಥಿಕ ಸಲಹೆಗಾರರ ಸಹಮತಿ ಸಂಖ್ಯೆ: ಗ್ರಾಅಪ **189 ಪಿಬಿಎಸ್ 2018, ದಿನಾಂಕ 09.04.2018ರಲ್ಲಿ** ಪಡೆದು ಹೊರಡಿಸಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ

(ಎನ್.ಕೃಷ್ಣಪ್ಪ)
ನಿರ್ದೇಶಕರು (ಗ್ರಾಮೂಸೌ-2) ಹಾಗೂ
ಪದನಿಮಿತ್ತ ಸರ್ಕಾರದ ಜಂಟಿ ಕಾರ್ಯದರ್ಶಿ,
ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ.

ಗೆ,

1. ಮಹಾಲೇಖಪಾಲರು, ಕರ್ನಾಟಕ, ಬೆಂಗಳುರು.
2. ಕಾರ್ಯನಿರ್ವಾಹಕ ನಿರ್ದೇಶಕರು, ಮಹಾತ್ಮ ಗಾಂಧಿ ಗ್ರಾಮೀಣ ಇಂಧನ ಮತ್ತು ಅಭಿವೃದ್ಧಿ ಸಂಸ್ಥೆ, ಜಕ್ಕೂರು, ಬೆಂಗಳೂರು.
3. ಜಂಟಿ ನಿರ್ದೇಶಕರು ರಾಜ್ಯ ಹುಜೂರು ಖಜಾನೆ, ಬೆಂಗಳೂರು.
4. ಆಂತರಿಕ ಆರ್ಥಿಕ ಸಲಹೆಗಾರರು, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ.
5. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಗಳು / ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು (ಪಂ.ರಾಜ್) ರವರ ಆಪ್ತ ಕಾರ್ಯದರ್ಶಿಗಳು, ಗ್ರಾಅಪ ಇಲಾಖೆ.
6. ಉಪ ನಿರ್ದೇಶಕರು (ತಾಂತ್ರಿಕ), ಗ್ರಾಮೂಸೌ ಕೋಶ, ಗ್ರಾಅಪ ಇಲಾಖೆ.
7. ಉಪ ನಿರ್ದೇಶಕರು, TNMC, 2ನೇ ಮಹಡಿ, ಖನಿಜ ಭವನ, ಬೆಂಗಳೂರು.
8. ವಿಶೇಷಾಧಿಕಾರಿ, ಇಲಾಖಾ ಗಣಕ ಕೇಂದ್ರ, ಗ್ರಾಅಪ ಇಲಾಖೆ.
9. ರಕ್ಷಾ ಕಡತಕ್ಕೆ / ಹೆಚ್ಚುವರಿ ಪ್ರತಿ.